## ಶ್ರೀ ಪುಟ್ಟಣ್ಣ ಮಾನ್ಯ ವಿಧಾನ ಪರಿಷತ್ತು ಸದಸ್ಯರು ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಸೂಚನೆ:** ಸಮಾಜ ಕಲ್ಯಾಣ ಇಲಾಖೆ / ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ಮೊರಾರ್ಜಿ ದೇಸಾಯಿ ಮತ್ತಿತರ ವಿವಿಧ ವಸತಿ ಶಾಲೆಗಳಲ್ಲಿ ಸುದೀರ್ಘ ಸೇವೆ ಸಲ್ಲಿಸುತ್ತಿರುವ ಅತಿಥಿ ಶಿಕ್ಷಕರು ಕರ್ನಾಟಕದ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ಸಲ್ಲಿಸಿದ್ದ ಡಬ್ಲ್ಯೂಪಿ-52876/2018-1412-1546/2019 ಆರ್.ಇ. ಡಬ್ಲ್ಯೂಪಿ-12562-12564, ಡಬ್ಲ್ಯೂಪಿ- 46240-45716/ 2018 ದಾವೆಗಳಲ್ಲಿ ಸದರಿ ಶಿಕ್ಷಕರನ್ನು ಖಾಯಂ ಮಾಡುವಂತೆ ಆದೇಶವಾಗಿದ್ದರು ಸಹ ಇದುವರೆಗೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಈ ಬಗ್ಗೆ ಹಿಂದೆ ಸದನದಲ್ಲಿಯು ಸಹ ಸಚಿವರು ಕೋರ್ಟ್ ಆದೇಶದಂತೆ ಶಿಕ್ಷಕರನ್ನು ಕಾಯಂಗೊಳಿಸುವುದಾಗಿ ಭರವಸೆ ನೀಡಿರುತ್ತಾರೆ. ಆದರೆ ಇತ್ತೀಚಿಗೆ ಸದರಿ ಶಿಕ್ಷಕರನ್ನು ಏಕಾಏಕಿ ಸೇವೆಯಿಂದ ಬಿಡುಗಡೆಗೊಳಿಸಿ ತೊಂದರೆ ನೀಡಲಾಗುತ್ತಿದೆ. ಸದರಿ ಶಿಕ್ಷಕರಿಗೆ ತೊಂದರೆ ನೀಡುತ್ತಿರುವ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಂಡು ಕೋರ್ಟ್ ಆದೇಶದಂತೆ ಸದರಿ ಶಾಲೆಗಳ ಅತಿಥಿ ಶಿಕ್ಷಕರನ್ನು ಸೇವೆಯಲ್ಲಿ ಖಾಯಂಗೊಳಿಸಬೇಕೆಂಬ ವಿಷಯವನ್ನು ಸದನದಲ್ಲಿ ನಿಯಮ 72 ರಲ್ಲಿ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಸಚಿವರಲ್ಲಿ ಪ್ರಸ್ತಾಪಿಸುತ್ತೇನೆ.

****

**ಉತ್ತರ:-** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿನ ವಸತಿ ಶಾಲೆ/ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಎದುರಾಗಿ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರ ಸೇವೆಯನ್ನು ಜಿಲ್ಲಾ ಹಂತದಲ್ಲಿ ಆಯ್ಕೆ ಮಾಡಿಕೊಳ್ಳಲಾಗುತ್ತಿದೆ.

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಬೋಧಕ/ಬೋಧಕೇತರ ಹುದ್ದೆಗಳ ನೇಮಕಾತಿಗೆ ಕ್ರಮವಹಿಸಿ, ಆಯೋಗವು ಅಂತಿಮ ಆಯ್ಕೆಪಟ್ಟಿ ಪ್ರಕಟಿಸಿದ ಅಭ್ಯರ್ಥಿಗಳಿಗೆ ನಿಯಮಾನುಸಾರ ಸಂಘದ ಅಡಿಯಲ್ಲಿನ ವಸತಿ ಶಾಲೆ/ಕಾಲೇಜುಗಳಲ್ಲಿನ ಖಾಲಿ ಹುದ್ದೆಗಳಿಗೆ ಕೌನ್ಸಿಲಿಂಗ್ ಮುಖಾಂತರ ನೇಮಕಾತಿ ಆದೇಶ ನೀಡಲಾಗಿರುತ್ತದೆ. ಈ ರೀತಿ ಕೌನ್ಸಿಲಿಂಗ್ ಮುಖಾಂತರ ಆದೇಶ ಪಡೆದ ಶಿಕ್ಷಕರು ಆಯ್ಕೆ ಮಾಡಿಕೊಂಡ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅತಿಥಿ ಶಿಕ್ಷಕರ ಸೇವೆಯನ್ನು ನಿಯಮಾನುಸಾರ ಬಿಡುಗಡೆ ಮಾಡಲಾಗಿರುತ್ತದೆ.

ಅತಿಥಿ ಶಿಕ್ಷಕರ ಸೇವೆಯನ್ನು ಖಾಯಂ ಮಾಡುವ ಕುರಿತಂತೆ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯವು WP No: 52876/2018 & 1412-1546/2019, WP No: 12562-12564/2018, WP No 46240/2018, WP No 45714-45716/ 2018, ರ ಪ್ರಕರಣಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಅಂತಿಮ ಆದೇಶವನ್ನು ನೀಡಿರುತ್ತದೆ.

> "The third respondent is directed to consider the representation of the petitioners strictly in accordance with law. The writ petitions stand disposed off accordingly. The interim order granted earlier shall stand dissolved".

ಮಾನ್ಯ ನ್ಯಾಯಾಲಯದ ಆದೇಶದಂತೆ ಅತಿಥಿ ಶಿಕ್ಷಕರ ಮನವಿಗಳನ್ನು ಪರಿಶೀಲಿಸಿ, ಅತಿಥಿ ಶಿಕ್ಷಕರನ್ನು ಖಾಯಂಗೊಳಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ ಎಂದು ಹಿಂಬರಹವನ್ನು ನೀಡಲಾಗಿರುತ್ತದೆ.

**ಕಡತ ಸಂಖ್ಯೆ: ಸಕಇ 82 ಮೊದೇಶಾ 2022**

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು